# ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ

ನವನಗರ, ಹುಬ್ಬಳ್ಳಿ– 580025

**ನ್ಯಾಕ 'ಎ' ಶ್ರೇಣಿ ಮಾನ್ಯತೆ**

ದೂರವಾಣಿ ಸಂಖ್ಯೆ : 0836–2222392 ಜಾಲತಾಣ :www.kslu.karnataka.gov.in

ಫ್ಯಾಕ್ಸ್ : 0836–2223392 ಇ–ಮೇಲ್ :kslu.registrar@gmail.com


ಸಂಖ್ಯೆ: ಕರಾಕಾವಿ/ಸಿಆಸುಇ/2023–24/3462 ದಿನಾಂಕ: 28.03.2024.

**ಪರಿಷ್ಕೃತ ವಯೋಮಿತಿ ಸುತ್ತೋಲೆ**

**ವಿಷಯ:** ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿಯಲ್ಲಿ 371(ಜೆ) ಕಲ್ಯಾಣ ಕರ್ನಾಟಕದ (ಸ್ಥಳೀಯ ವೃಂದದಲ್ಲಿ) ಲಭ್ಯವಿರುವ ಬೋಧಕೇತರ ಹುದ್ದೆಗಳನ್ನು ತುಂಬಲು ಅರ್ಹ ಸ್ಥಳೀಯ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸುವ ಕುರಿತು.

**ಉಲ್ಲೇಖ:** ನೇಮಕಾತಿ ಅಧಿಸೂಚನೆ ಸಂಖ್ಯೆ: ಕರಾಕಾವಿ/ಸಿಆಸುಇ/2023–24/3312 ದಿನಾಂಕ: 13.03.2024.

ಅರ್ಜಿ ಸಲ್ಲಿಸುವ ಪರಿಷ್ಕೃತ ವಯೋಮಿತಿಯು ಈ ಕೆಳಗಿನಂತಿವೆ,

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | |
|---|---|
| ಕನಿಷ್ಠ | 18 ವರ್ಷ |
| ಗರಿಷ್ಠ:<br>ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಪ್ರವರ್ಗ 2ಎ/2ಬಿ/3ಎ/3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1 ಅಭ್ಯರ್ಥಿಗಳಿಗೆ | 40 ವರ್ಷಗಳು |

**ವಯೋಮಿತಿ ಸಡಲಿಕೆಗಳು:**

| ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ. | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ. | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |

| | | |
|---|---|---|
| (ಇ) | ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ. | ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು. |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ. | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು. |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ. | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಆವುದು ಕಡಿಮೆಯೋ ಅಷ್ಟು ವರ್ಷಗಳು. |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯ ಸಕ್ಷಮ ಪಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| (ಎ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1975ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

**ಸೂಚನೆ:** ನೇಮಕಾತಿ ಅಧಿಸೂಚನೆಗೆ ಸಂಬಂಧಿಸಿದ ಇನ್ನುಳಿದ ಎಲ್ಲ ಸೂಚನೆಗಳು ಈ ಹಿಂದೆ ಹೊರಡಿಸಿದ ನೇಮಕಾತಿ ಅಧಿಸೂಚನೆ ಸಂಖ್ಯೆ: ಕರಾಕಾವಿ/ಪಿಆಸುಇ/2023-24/3312 ದಿನಾಂಕ: 13.03.2024ರಂತೆ ಇರುತ್ತದೆ.

(signature) 27/03/24

ಕುಲಸಚಿವರು

(initials) 27/3